153 ಸೇಕ - ವಿ-72 - (80)
UM
07-07

# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಎಂ.ಎಲ್.ಅನಿಲ್ ಕುಮಾರ್ ಇವರು ನಿಯಮ-72 ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಕೋಲಾರ ಜಿಲ್ಲೆ, ಶ್ರೀನಿವಾಸಪುರ ತಾಲ್ಲೂಕು, ಗೌನಿಪಲ್ಲಿ ಗ್ರಾಮ ಪಂಚಾಯಿತಿ ಗೌನಿಪಲ್ಲಿ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ಕಟ್ಟಡವನ್ನು ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಈ ಹಿಂದೆ ನೀಡಿದ್ದು , ಅದೇ ಕಟ್ಟಡವನ್ನು ನೆಲಸಮ ಮಾಡಿ ವಾಣಿಜ್ಯ ಕಟ್ಟಡ ಕಟ್ಟುತ್ತಿದ್ದು, ಪಂಚಾಯಿತಿ ಅಧ್ಯಕ್ಷ ಹಾಗೂ ಅಧಿಕಾರಿಗಳ ಸರ್ಕಾರದ ಆಸ್ತಿ ದುರುಪಯೋಗ ಮಾಡುತ್ತಿರುವುದರ ಬಗ್ಗೆ.

**ಉತ್ತರ:** ಕೋಲಾರ ಜಿಲ್ಲೆ, ಶ್ರೀನಿವಾಸಪುರ ತಾಲ್ಲೂಕು, ಗೌನಿಪಲ್ಲಿ ಗ್ರಾಮ ಪಂಚಾಯಿತಿ ಗೌನಿಪಲ್ಲಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಕಟ್ಟಡವು ಗ್ರಾಮಠಾಣಾವು ಜಾಗವಾಗಿರುತ್ತದೆ. ಸದರಿ ಜಾಗವು ಅಧ್ಯಕ್ಷರು ಹಾಲು ಉತ್ಪಾದಕರ ಸಹಕಾರ ಸಂಘ ನಿಯಮಿತ ಗೌನಿಪಲ್ಲಿ ಎಂದು ಡಿಮ್ಯಾಂಡ್ ರಿಜಿಸ್ಟರ್‌ನಲ್ಲಿ ನಮೂದಾಗಿರುತ್ತದೆ.

ಹಳೆಯ ಗ್ರಾಮ ಪಂಚಾಯಿತಿ ಕಟ್ಟಡವನ್ನು ದಿನಾಂಕ:02-07-2024 ರಂದು ತೆರವುಗೊಳಿಸಿದ್ದು, ಆದರೆ ಕಟ್ಟಡ ಶಿಥಿಲಗೊಂಡಿರುವ ಬಗ್ಗೆ ಸಂಬಂಧಪಟ್ಟ ತಾಂತ್ರಿಕ ಇಲಾಖೆಯಿಂದ ದೃಢೀಕರಿಸಿಕೊಂಡು ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ತೆರವುಗೊಳಿಸಬೇಕಾಗಿರುತ್ತದೆ. ಆದುದರಿಂದ ಇದು ಕಾನೂನುಬಾಹಿರವಾಗಿರುತ್ತದೆ.

ಶ್ರೀ ರಾಮ್ ಮೋಹನ್ ಬಿನ್ ಮುನೆಪ್ಪ, ಗೌನಿಪಲ್ಲಿ ಗ್ರಾಮ ಇವರು ವಿವಾದಿತ ಸ್ಥಳದಲ್ಲಿ ದಿನಾಂಕ:12-07-2024 ರಿಂದ ವಾಣಿಜ್ಯ ಕಟ್ಟಡಗಳನ್ನು ಗ್ರಾಮ ಪಂಚಾಯತಿ ಆಡಳಿತದ ಗಮನಕ್ಕೆ ತರದೆ ನಿರ್ಮಾಣ ಮಾಡುತ್ತಿರುವುದು ಕಾನೂನುಬಾಹಿರವಾಗಿರುತ್ತದೆ.

ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀನಿವಾಸಪುರ ರವರು ದಿನಾಂಕ:18.07.2024ರಂದು ಪೋಲಿಸ್ ಅಧಿಕಾರಿ/ಸಿಬ್ಬಂದಿ ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ/ಸಿಬ್ಬಂದಿ, ಗ್ರಾಮ ಪಂಚಾಯತಿ ಸದಸ್ಯರು ಮತ್ತು ಗ್ರಾಮಸ್ಥರು ವಾಣಿಜ್ಯ ಕಟ್ಟಡ ನಿರ್ಮಾಣ ಸ್ಥಳಕ್ಕೆ ಭೇಟಿ ನೀಡಿ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಸ್ಥಗಿತಗೊಳಿಸಲು ಸೂಚಿಸಲಾಗಿದ್ದು, ಅದರಂತೆ ವಾಣಿಜ್ಯ ಕಟ್ಟಡ ನಿರ್ಮಾಣ ಸ್ಥಗಿತವಾಗಿರುತ್ತದೆ.

ಸಂಖ್ಯೆ:RDPR 355 GPA 2024

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.